# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 15 (118) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಕೇಶವ ಪ್ರಸಾದ್ ಎಸ್.<br>(ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 27.01.2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯ ಸರ್ಕಾರ ಪ್ರಸಕ್ತ ಸಾಲಿನಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಯ ಸ್ಥಾಪನೆಗಾಗಿ ರಾಜ್ಯದಲ್ಲಿ ಎಷ್ಟು ಮೊತ್ತದ ಹೂಡಿಕೆಯನ್ನು ಆಕರ್ಷಿಸಲು ಸಫಲವಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು) | ಪ್ರಸಕ್ತ ಸಾಲಿನಲ್ಲಿ (01.04.2025 ರಿಂದ ಪ್ರಸ್ತುತದವರೆಗೆ) ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಹಾಗೂ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಗಳಲ್ಲಿ ಒಟ್ಟು 313 ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇವುಗಳಿಂದ ರೂ.60,918 ಕೋಟಿ ಮೊತ್ತದ ಬಂಡವಾಳ ಹೂಡಿಕೆ ಮತ್ತು 85,544 ಉದ್ಯೋಗಾವಕಾಶಗಳನ್ನು ನಿರೀಕ್ಷಿಸಲಾಗಿದೆ. |
| ಆ | ಸದರಿ ಹೂಡಿಕೆಯಿಂದ ರಾಜ್ಯದಲ್ಲಿ ಎಷ್ಟು ಸಂಖ್ಯೆಯ ಉದ್ಯೋಗಾವಕಾಶಗಳು ಸೃಷ್ಟಿಯಾಗಿವೆ; (ವಿವರ ನೀಡುವುದು) | ಇವುಗಳೆಲ್ಲಾ ಬೃಹತ್ ಕೈಗಾರಿಕೆಗಳಾಗಿರುವುದರಿಂದ ಯೋಜನೆಗಳ ಅನುಷ್ಠಾನಕ್ಕೆ ಕನಿಷ್ಠ 3 ರಿಂದ 5 ವರ್ಷಗಳು ಬೇಕಾಗುತ್ತದೆ.<br><br>ಸದರಿ ಯೋಜನೆಗಳು ವಿವಿಧ ಅನುಷ್ಠಾನದ ಹಂತಗಳಲ್ಲಿದ್ದು, ಇವುಗಳಿಂದ 85,544 ಉದ್ಯೋಗಾವಕಾಶಗಳನ್ನು ನಿರೀಕ್ಷಿಸಲಾಗಿದೆ. |
| ಇ | ವಿಜಯಪುರ ಜಿಲ್ಲೆಯಲ್ಲಿ ಹೆಚ್ಚು ಸಂಖ್ಯೆಯ ನಿರುದ್ಯೋಗಿ ಯುವಕ/ ಯುವತಿಯರಿದ್ದು, ಜಿಲ್ಲೆಯಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಅಗತ್ಯ ಮೂಲಭೂತ ಸೌಕರ್ಯ ಹಾಗೂ ಮಾನವ ಸಂಪನ್ಮೂಲಗಳು ಲಭ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಸಕ್ತ ಸಾಲಿನಲ್ಲಿ ರಾಜ್ಯ ಮಟ್ಟದ ಏಕ ಗವಾಕ್ಷಿ ಅನುಮೋದನೆ ಸಮಿತಿಯಿಂದ ವಿಜಯಪುರ ಜಿಲ್ಲೆಯಲ್ಲಿ 5 ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ.<br><br>ಇವುಗಳಿಂದ ರೂ.1,698.14 ಕೋಟಿ ಬಂಡವಾಳ ಹೂಡಿಕೆ ಮತ್ತು 1,725 ಉದ್ಯೋಗಾವಕಾಶ ನಿರೀಕ್ಷಿಸಲಾಗಿದೆ.<br><br>ಪ್ರಸಕ್ತ ಸಾಲಿನಲ್ಲಿ ಅನುಮೋದನೆಯಾದ ಯೋಜನೆಗಳು ವಿವಿಧ ಅನುಷ್ಠಾನ ಹಂತಗಳಲ್ಲಿರುತ್ತವೆ. |
| ಈ | ಬಂದಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ರಾಜ್ಯ ಸರ್ಕಾರವು ವಿಜಯಪುರ ಜಿಲ್ಲೆಯಲ್ಲಿ ಎಷ್ಟು ಸಂಖ್ಯೆಯ ಕೈಗಾರಿಕೆಗಳನ್ನು ಸ್ಥಾಪಿಸಲು ಹೂಡಿಕೆಗಳನ್ನು ಆಕರ್ಷಿಸಿದೆ; | |
| ಉ | ಇದರಿಂದಾಗಿ ಜಿಲ್ಲೆಯ ಎಷ್ಟು ನಿರುದ್ಯೋಗಿ ಯುವಕ /ಯುವತಿಯರಿಗೆ ಉದ್ಯೋಗ ದೊರಕಿದೆ? (ವಿವರ ನೀಡುವುದು) | |

**ಕಡತ ಸಂಖ್ಯೆ: ಸಿಐ 20 ಎಸ್‌ಪಿಐ 2026**

**(ಎಂ.ಬಿ.ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು